# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 870
ಮಾನ್ಯ ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ ಗೌಡ
(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.03.2025
ಉತ್ತರಿಸುವ ಸಚಿವರು. : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇತ್ತೀಚೆಗೆ ಸುಳ್ಳು ದೂರುಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಲ್ಲಿಯವರೆಗೂ ಎಷ್ಟು ಸುಳ್ಳು ದೂರುದಾರರ ಮೇಲೆ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ಇತ್ತೀಚೆಗೆ ಸುಳ್ಳು ದೂರುಗಳು ದಾಖಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. 2023 ರಲ್ಲಿ 06 ಪ್ರಕರಣಗಳು, 2024 ರಲ್ಲಿ 01 ಪ್ರಕರಣದಲ್ಲಿ ಸುಳ್ಳು ದೂರುದಾರರ ಮೇಲೆ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ವರ್ಷವಾರು ಮತ್ತು ಜಿಲ್ಲಾವಾರು ವಿವರಗಳನ್ನು **ಅನುಬಂಧ-ಅ** ರಲ್ಲಿ ಒದಗಿಸಲಾಗಿದೆ. |
| ಆ) | ದೂರುದಾರರು ದೂರು ನೀಡಿದ ನಂತರ ದೂರಿನ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಠಾಣಾಧಿಕಾರಿ ಪರಿಶೀಲಿಸಬೇಕಾದ ಅಂಶಗಳು ಯಾವುವು; | ದೂರಿನ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಠಾಣಾಧಿಕಾರಿಯವರಿಂದ ಈ ಕೆಳಕಂಡ ಅಂಶಗಳನ್ನು ಪಾಲಿಸಲಾಗುತ್ತಿದೆ:-<br>1. ಪ್ರಕರಣ ದಾಖಲಾದ ನಂತರ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷಿಗಳನ್ನು ಸಂಗ್ರಹಿಸುವುದು.<br>2. ಸಾಕ್ಷಿಗಳ ಹೇಳಿಕೆಯನ್ನು ಪಡೆದುಕೊಳ್ಳುವುದು, ಘಟನಾ ಸ್ಥಳದ ಪಂಚನಾಮೆ ಮತ್ತು ವಿಡಿಯೋ ಚಿತ್ರೀಕರಣ ಮಾಡಿ, ಘಟನೆ ಬಗ್ಗೆ ಸತ್ಯಾ ಸತ್ಯತೆ ತಿಳಿದುಕೊಳ್ಳುವುದು.<br>3. ಪ್ರಕರಣದಲ್ಲಿ ಜಪ್ತು ಮಾಡಿದ ವಸ್ತುಗಳನ್ನು ಸಂಗ್ರಹಿಸಿ, ಎಫ್.ಎಸ್.ಎಲ್.ಗೆ ಕಳುಹಿಸಿ ಸತ್ಯಾ ಸತ್ಯತೆ ತಿಳಿದುಕೊಳ್ಳುವುದು.<br>4. ದೂರು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು.<br>5. ಘಟನಾ ಸ್ಥಳಕ್ಕೆ ಭೇಟಿ ನೀಡಿ ಪಂಚರ ಸಮಕ್ಷಮ ಪಂಚನಾಮೆ ನಡೆಸುವುದು.<br>6. ಘಟನೆಯ ಪ್ರತ್ಯಕ್ಷ/ಪರೋಕ್ಷ ಸಾಕ್ಷಿದಾರರ ವಿಚಾರಣೆ ಮಾಡಿ ಹೇಳಿಕೆ ಪಡೆಯಲಾಗುತ್ತದೆ.<br>7. ದೂರಿಗೆ ಸಂಬಂಧಪಟ್ಟಂತಹ ದಾಖಲಾತಿಗಳನ್ನು ಸಂಗ್ರಹಿಸಲಾಗುತ್ತದೆ.<br>8. ಘಟನಾ ಸ್ಥಳದ ಸುತ್ತಮುತ್ತ ಸಿಸಿ ಕ್ಯಾಮರಾಗಳಿದ್ದಲ್ಲಿ ಪರಿಶೀಲಿಸಿ, ಸಿಸಿ ಟಿವಿ ಫೂಟೇಜ್ ಸಂಗ್ರಹಿಸಲಾಗುತ್ತದೆ.<br>9. ಅವಶ್ಯವಿದ್ದಲ್ಲಿ ಸಿಡಿಆರ್ ಮತ್ತು ಎಸ್‌ಡಿಆರ್ ಮಾಹಿತಿ ಪಡೆದುಕೊಂಡು ಪರಿಶೀಲಿಸಲಾಗುತ್ತದೆ.<br>10. ತನಿಖೆಯನ್ನು ಪೂರ್ಣಗೊಳಿಸಿ, ಆರೋಪ ಸಾಬೀತಾದಲ್ಲಿ, ಆರೋಪಿತರ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಲಾಗುತ್ತದೆ. ಒಂದು ವೇಳೆ |

| | | |
|---|---|---|
| | | ಆರೋಪ ಸಾಬೀತಾಗದೇ ಇದ್ದಲ್ಲಿ ಮಾನ್ಯ ನ್ಯಾಯಾಲಯಕ್ಕೆ 'ಬಿ' ಅಂತಿಮ ವರದಿಯನ್ನು ಸಲ್ಲಿಸಲಾಗುತ್ತದೆ. |
| ಇ) | ಉದ್ದೇಶ ಪೂರ್ವಕವಾಗಿ ಸುಳ್ಳು ದೂರು ದಾಖಲಿಸಿ ಅಮಾಯಕರಿಗೆ ತೊಂದರೆ ನೀಡಿದಲ್ಲಿ ಅಂತಹ ಅಧಿಕಾರಿಗಳು ಮತ್ತು ದೂರುದಾರರ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು; . | ಉದ್ದೇಶ ಪೂರ್ವಕವಾಗಿ ಸುಳ್ಳು ದೂರು ದಾಖಲಿಸಿ ಅಮಾಯಕರಿಗೆ ತೊಂದರೆ ನೀಡಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಕೈಗೊಂಡು, ಅವರ ಮೇಲೆ ಕಾನೂನು ರೀತಿಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ದೂರುದಾರರು ಸುಳ್ಳು ದೂರು ದಾಖಲಿಸಿದ್ದಲ್ಲಿ, ಅವರ ವಿರುದ್ಧ ಕಲಂ 228/248 ಬಿಎನ್ಎಸ್ ಕಾಯ್ದೆ 2023 ರಡಿಯಲ್ಲಿ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದು. |
| ಈ) | ಸುಳ್ಳು ದೂರಿನಿಂದ ತೊಂದರೆಗೆ ಒಳಗಾದ ಸಾರ್ವಜನಿಕರು ಪರಿಹಾರಕ್ಕಾಗಿ ಯಾವ ಅಧಿಕಾರಿಗಳನ್ನು ಸಂಪರ್ಕಿಸಬೇಕಾಗುತ್ತದೆ; ಇದಕ್ಕೆ ಇರುವ ಪರಿಹಾರವೇನು; | ತನಿಖೆಯಲ್ಲಿ ನೀಡಿರುವ ದೂರು ಸುಳ್ಳೆಂದು ಸಾಬೀತಾಗಿ, ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿದ ಪ್ರಕರಣಗಳಲ್ಲಿ, ನೊಂದ ಸಾರ್ವಜನಿಕರು, ಮಾನ್ಯ ನ್ಯಾಯಾಲಯಗಳಲ್ಲಿ ದೂರುದಾರರ ವಿರುದ್ಧ ಕಲಂ 217 ಬಿಎನ್ಎಸ್(ಕಲಂ 182 ಐಪಿಸಿ) ರಂತೆ ಪ್ರತಿ ದೂರು ಸಲ್ಲಿಸಬಹುದು. ಅಲ್ಲದೇ ಪರಿಹಾರಕ್ಕಾಗಿ ಕಲಂ 499 ಮತ್ತು ಕಲಂ 500 ಐಪಿಸಿ (ಕಲಂ 356(1), 356(2) ಬಿಎನ್ಎಸ್ಎಸ್) ರಂತೆ ಮಾನನಷ್ಟ ಮೊಕದ್ದಮೆಯನ್ನು ದಾಖಲಿಸಬಹುದಾಗಿರುತ್ತದೆ. |
| ಉ) | ಅಮಾಯಕರ ಮೇಲೆ ದಾಖಲಾಗಿರುವ ಸುಳ್ಳು ದೂರುಗಳನ್ನು ರದ್ದು ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು? | ದೂರುದಾರರು ನೀಡಿದ ದೂರು ಸುಳ್ಳು ಎಂದು ಕಂಡು ಬಂದಲ್ಲಿ, ತನಿಖಾಧಿಕಾರಿಗಳು ಅಗತ್ಯ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ಬಿ-ಅಂತಿಮ ವರದಿಯನ್ನು ಸಲ್ಲಿಸುತ್ತಿರುತ್ತಾರೆ ಮತ್ತು ಆರೋಪಿಯು ಸಹ ಸಿಆರ್‌ಪಿಸಿ 482 / ಬಿಎನ್ಎಸ್ಎಸ್ 528 ರಡಿಯಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾವೆ ಹೂಡಿ, ಪ್ರಕರಣ ರದ್ದು ಪಡಿಸುವ ಕುರಿತು ಅಪೀಲನ್ನು ಸಲ್ಲಿಸಬಹುದುದಾಗಿರುತ್ತದೆ. |

ಸಂಖ್ಯೆ: ಹೆಚ್‌ಡಿ 26 ಪಿಸಿಕ್ಯೂ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

## ಅನುಬಂದ-ಅ

| ಕ್ರಮ ಸಂಖ್ಯೆ | ಘಟಕ | ವರ್ಷ | | | |
|---|---|---|---|---|---|
| | | 2022 | 2023 | 2024 | 2025 |
| 1. | ಸಿಓಪಿ, ಬೆಂಗಳೂರು. | 0 | 02 | 01 | 0 |
| 2. | ಎಸ್‌ಪಿ, ದಾವಣಗೆರೆ. | 0 | 02 | 0 | 0 |
| 3. | ಎಸ್‌ಪಿ, ಬಿದರ್. | 0 | 02 | 0 | 0 |
| ಒಟ್ಟು | | 0 | 06 | 01 | 0 |